# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಜೆ.ಬಿ.ಜಗದೀಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹೊಸದುರ್ಗ ಇವರನ್ನು ವಿಚಾರಣೆ ಬಾಕಿ ಇಟ್ಟು ಅಮಾನತ್ತುಗೊಳಿಸುವ ಬಗ್ಗೆ - ಆದೇಶ.

ಓದಲಾಗಿದೆ:- ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿತ್ರದುರ್ಗ ಇವರ ಪತ್ರ ಸಂಖ್ಯೆ. ಜಿಪಂಆ(3)/ಸಿಸಿಎ/ಸಿಆರ್-07/2012-13 ದಿನಾಂಕ. 17-04-2012.

**ಪ್ರಸ್ತಾವನೆ:**

ಶ್ರೀ ಜೆ.ಬಿ.ಜಗದೀಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹೊಸದುರ್ಗ ಇವರು 2009-10ನೇ ಸಾಲಿನ ಆರ್.ಐ.ಡಿ.ಎಫ್. ನಬಾರ್ಡ್ 15ರ ಯೋಜನೆಯಡಿ ಅನುಷ್ಠಾನಗೊಂಡಿರುವ ಹೊಸದುರ್ಗ ತಾಲ್ಲೂಕು ಟಿ.ಹೆಚ್.ರಸ್ತೆಯಿಂದ ನೀರಗುಂದ ರಸ್ತೆ ಅಭಿವೃದ್ಧಿ ಕಾಮಗಾರಿ ಅಂದಾಜು ಪಟ್ಟಿಯಂತೆ ಸರಪಳಿ 0.80 ರಿಂದ 2.30ರ ವರೆಗೆ ಒಂದು ಪದರ ಅಂದರೆ 7.05 ಸೆಂ.ಮೀ. ದಪ್ಪದ ಮೆಟ್ಲಿಂಗ್ ಹಾಗೂ ಸರಪಳಿ 2.30 ರಿಂದ 2.82 ರವರೆಗೆ ಎರಡು ಪದರ ಅಂದರೆ 15.00 ಸೆಂ.ಮೀ. ದಪ್ಪದ ಪದರ ನಿರ್ವಹಿಸಬೇಕಾಗಿತ್ತು. ಆದರೆ, ಸದರಿಯವರು 11.00 ರಿಂದ 12.00 ಸೆಂ.ಮೀ. ದಪ್ಪದವರೆಗಿನ ಮೆಟ್ಲಿಂಗ್ ಪದರ ನಿರ್ವಹಿಸಿದ್ದರು. ಇದರಿಂದ ರೂ. 1,03,476-32 ಗಳನ್ನು ಗುತ್ತಿಗೆದಾರರಿಗೆ ಪಾವತಿಸಿ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟು ಮಾಡಿ ಕರ್ತವ್ಯಲೋಪವೆಸಗಿದ್ದಾರೆಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿತ್ರದುರ್ಗ ರವರು ಮೇಲೆ ಓದಲಾದ ದಿನಾಂಕ. 17-04-2012ರ ಪತ್ರದಲ್ಲಿ ವರದಿ ಮಾಡಿ ಅಮಾನತ್ತುಪಡಿಸುವಂತೆ ಶಿಫಾರಸ್ಸು ಮಾಡಿದ್ದಾರೆ.

ಪ್ರಕರಣದ ಗಂಭೀರತೆಯನ್ನು ಪರಿಗಣಿಸಿ, ಶ್ರೀ ಜೆ.ಬಿ.ಜಗದೀಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹೊಸದುರ್ಗ ಇವರ ವಿರುದ್ಧದ ಇಲಾಖಾ ವಿಚಾರಣೆಯನ್ನು ಕಾಯ್ದಿರಿಸಿ, ಅಮಾನತ್ತಿನಲ್ಲಿಡುವುದು ಸೂಕ್ತವೆಂದು ಸರ್ಕಾರವು ನಿರ್ಧರಿಸಿ ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ ಗ್ರಾಅಪ 16 ಇಎನ್‌ಕ್ಯೂ 2012, ಬೆಂಗಳೂರು, ದಿನಾಂಕ.04-07-2012**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಅಪೀಲು) ನಿಯಮಗಳು, 1957ರ 10 (1) (ಡಿ) ರಲ್ಲಿ ಪ್ರದತ್ತವಾದ ಅಧಿಕಾರದನ್ವಯ ಶ್ರೀ ಜೆ.ಬಿ.ಜಗದೀಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹೊಸದುರ್ಗ ಇವರ ವಿರುದ್ಧ ಇಲಾಖಾ ವಿಚಾರಣೆಯನ್ನು ಬಾಕಿಯಿಟ್ಟು, ತಕ್ಷಣದಿಂದ ಜಾರಿಗೆ ಬರುವಂತೆ ಸೇವೆಯಿಂದ ಅಮಾನತ್ತುಗೊಳಿಸಿದೆ.

ಈ ಹುದ್ದೆಯ ಸ್ಥಾನ (ಲೀನ್) ವನ್ನು ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು ರವರ ಕಚೇರಿಗೆ ವರ್ಗಾಯಿಸಿದೆ.

ಈ ಅಧಿಕಾರಿ ಅಮಾನತ್ತಿನ ಅವಧಿಯಲ್ಲಿ ಸಕ್ಷಮ ಪ್ರಾಧಿಕಾರದ ಅನುಮತಿ ಇಲ್ಲದೇ ಕೇಂದ್ರ ಸ್ಥಾನವನ್ನು ಬಿಡತಕ್ಕದ್ದಲ್ಲ ಹಾಗೂ ಕರ್ನಾಟಕ ನಾಗರೀಕ ಸೇವಾ ನಿಯ್ತಮಗಳು ನಿಯಮ 98ರ ಅನುಸಾರ ಜೀವನಾಧಾರ ಭತ್ಯೆಗೆ ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

4/7/12

(ಎನ್.ವೈ.ಸಾಗರ),
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

4/7/12

ಪ್ರತಿ:

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ / ಜಲ ಸಂಪನ್ಮೂಲ ಇಲಾಖೆ
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿತ್ರದುರ್ಗ.
   ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
4. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡ (ದಕ್ಷಿಣ), ಕೆ.ಆರ್.ಸರ್ಕಲ್, ಬೆಂಗಳೂರು.
5. ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ , (ಸೇ-ಎ ಮತ್ತು ಸಿ)
6. ಶ್ರೀ ಜೆ.ಬಿ.ಜಗದೀಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹೊಸದುರ್ಗ.
7. ಮಾನ್ಯ ಗ್ರಾ..ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
8. ಗ್ರಾ.ಅ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್)/ ಉಪ ಕಾರ್ಯದರ್ಶಿಯವರು (ಆಡಳಿತ) ಇವರ ಆಪ್ತ ಕಾರ್ಯದರ್ಶಿ/ ಆಪ್ತ ಸಹಾಯಕರಿಗೆ.
9. ಮಾಹಿತಿ ಕೇಂದ್ರ : ಹೆಚ್ಚುವರಿ ಪ್ರತಿ:ರಕ್ಷಾ ಕಡತ : ಕಂಪ್ಯೂಟರ್ ಸೆಲ್.